5. ಪ್ಲಾಸ್ಟಿಕ್ ತ್ಯಾಜ್ಯವನ್ನು ರಸ್ತೆ ನಿರ್ಮಾಣದ ಕಾಮಗಾರಿಯಲ್ಲಿ ಆಸ್ಫಾಲ್ಟ್ ಜೊತೆ ಬಳಕೆಗೆ ಪ್ರೋತ್ಸಾಹಿಸಲಾಗುತ್ತಿದೆ.

ವೈದ್ಯನಾಥನ್ ವರದಿ ಜಾರಿ

1041 (1085) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ವೈದ್ಯನಾಥನ್ ವರದಿಯನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ) ಹಾಗಿದ್ದಲ್ಲಿ, ಎಷ್ಟು ದಿವಸದೊಳಗಾಗಿ ಜಾರಿಗೆ ತರಲಾಗುವುದು? ಮಾಹಿತಿ ನೀಡುವುದು;

ಶ್ರೀ ಲಕ್ಷ್ಮಣ ಸವದಿ (ಸಹಕಾರ ಸಚಿವರು) :

ಅ) ಪ್ರೊ॥ ಎ.ವೈದ್ಯನಾಥನ್ ಕಾರ್ಯಪಡೆಯ ವರದಿಯ ಆಧಾರದ ಮೇಲೆ ರಾಜ್ಯ ಸರ್ಕಾರಗಳೊಡನೆ ಸಮಾಲೋಚಿಸಿ ಭಾರತ ಸರ್ಕಾರವು ಕೃಷಿ ಪತ್ತಿನ ಸಹಕಾರಿ ಸಂಸ್ಥೆಗಳ ಪುನರುತ್ಥಾನಕ್ಕಾಗಿ ರೂಪಿಸಿರುವ ಪುನಶ್ಚೇತನ ಪ್ಯಾಕೇಜನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಆ) ದಿನಾಂಕ: 25.03.2008 ರಂದು ಭಾರತ ಸರ್ಕಾರ, ನಬಾರ್ಡು ಮತ್ತು ಕರ್ನಾಟಕ ಸರ್ಕಾರ ಪ್ರೊ॥ ಎ.ವೈದ್ಯನಾಥನ್ ಕಾರ್ಯಪಡೆಯ ಶಿಫಾರಸ್ಸುಗಳ ಆಧಾರದ ಮೇಲೆ ಭಾರತ ಸರ್ಕಾರವು ರಾಜ್ಯ ಸರ್ಕಾರಗಳೊಡನೆ ಸಮಾಲೋಚಿಸಿ ಅಲ್ಪಾವಧಿ ಕೃಷಿ ಪತ್ತಿನ ಸಹಕಾರ ಸಂಸ್ಥೆಗಳ ಪುನಶ್ಚೇತನಕ್ಕಾಗಿ ರೂಪಿಸಿರುವ ಪುನಶ್ಚೇತನ ಪ್ಯಾಕೇಜನ್ನು ಅನುಷ್ಠಾನಗೊಳಿಸುವ ಸಂಬಂಧದಲ್ಲಿ ತ್ರಿಪಕ್ಷೀಯ ಒಡಂಬಡಿಕೆ (MoU) ಗೆ ಸಹಿ ಹಾಕಿರುತ್ತವೆ. ಸದರಿ ಒಡಂಬಡಿಕೆಗೆ ಅನುಗುಣವಾಗಿ ರಾಜ್ಯ ಸರ್ಕಾರವು ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.

1) ಈ ಕಾರ್ಯಕ್ರಮದ ಅನುಷ್ಠಾನದ ಮೇಲ್ವಿಚಾರಣೆ ನೋಡಿಕೊಳ್ಳಲು ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಅನುಷ್ಠಾನ ಸಮಿತಿ (SLIC) ಯನ್ನು ರಚಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಥವಾ ಜಿಲ್ಲಾ

ಪರಿಷತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ (DLIC) ಗಳನ್ನು ರಚಿಸಲಾಗಿದೆ.

2) ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಮುಚ್ಚಳಿಕೆ ಪತ್ರ (LoU) ಗಳನ್ನು ಬರೆದುಕೊಟ್ಟಿರುತ್ತವೆ.

3) ಪ್ರಾಥಮಿಕ ಕೃಷಿ ಪತ್ತಿ ಸಹಕಾರ ಸಂಘಗಳ ಲೆಕ್ಕಪತ್ರಗಳ ವಿಶೇಷ ಲೆಕ್ಕಪರಿಶೋಧನೆಗೆ ಲೆಕ್ಕಪರಿಶೋಧನಾ ಇಲಾಖೆಯ ಅಧಿಕಾರಿಗಳನ್ನು ನಿಯೋಜಿಸಲಾಗಿರುತ್ತದೆ.

4) ನಬಾರ್ಡ್ ಸೂಚನೆ/ ಮಾರ್ಗದರ್ಶನಗಳ ಅನುಸಾರ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವಿಶೇಷ ಲೆಕ್ಕ ಪರಿಶೋಧನೆಯನ್ನು ಮುಕ್ತಾಯಗೊಳಿಸಲಾಗಿದೆ. ನಬಾರ್ಡಿನಲ್ಲಿ ಲಭ್ಯವಿರುವ ಮಾಹಿತಿಯ ಪ್ರಕಾರ 19 ಡಿಸಿಸಿ ಬ್ಯಾಂಕುಗಳ ವ್ಯಾಪ್ತಿಯಲ್ಲಿ ಬರುವ 4,131 ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ವಿಶೇಷ ಲೆಕ್ಕಪರಿಶೋಧನೆ ಮುಗಿದಿದ್ದು ಒಟ್ಟಾರೆ ಪುನಶ್ಚೇತನ ಪ್ಯಾಕೇಜಿನ ಹಣ ರೂ.729.49 ಕೋಟಿಗಳಿದ್ದು ಈ ಪೈಕಿ ಭಾರತ ಸರ್ಕಾರವು ರೂ.572.82 ಕೋಟಿಗಳನ್ನು ಭರಿಸಿ ಕೊಡಲಿದ್ದು ರಾಜ್ಯ ಸರ್ಕಾರವು ರೂ.90.07 ಕೋಟಿ ಗಳನ್ನು ಭರಿಸಿಕೊಡಬೇಕಾಗುತ್ತದೆ.

5) ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ಕ್ಕೆ ಅಗತ್ಯ ತಿದ್ದುಪಡಿಗಳನ್ನು ತಿದ್ದುಪಡಿ ವಿಧೇಯಕ–1 ಮತ್ತು ತಿದ್ದುಪಡಿ ವಿಧೇಯಕ–2 ರ ಮೂಲಕ ವಿಧಾನ ಮಂಡಲದ ಉಭಯ ಸದನಗಳು ಅನುಮೋದನೆ ನೀಡಿದ್ದು ತಿದ್ದುಪಡಿ ವಿಧೇಯಕ–1 ಅನ್ನು ಘನತೆವೆತ್ತ ರಾಜ್ಯಪಾಲರ ಅನುಮೋದನೆಗಾಗಿ ಸಂಸದೀಯ ವ್ಯವಹಾರ ಮತ್ತು ಶಾಸನ ರಚನಾ ಇಲಾಖೆಯು ಸಲ್ಲಿಸುತ್ತಿದೆ. ತಿದ್ದುಪಡಿ ವಿಧೇಯಕ–2 ಅನ್ನು ಘನತೆವೆತ್ತ ರಾಷ್ಟ್ರಾಧ್ಯಕ್ಷರ ಅನುಮೋದನೆಗಾಗಿ ಕಳುಹಿಸಲಾಗುತ್ತಿದೆ.